# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 287

ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ :11.12.2024

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ "ಶಕ್ತಿ ಯೋಜನೆ" ಜಾರಿ ಬಳಿಕ ಶಾಲೆ-ಕಾಲೇಜುಗಳಿರುವ ಮಾರ್ಗದಲ್ಲಿ ಬಸ್‌ಗಳ ಸಂಖ್ಯೆ ಕೊರತೆಯಿಂದಾಗಿ ವಿದ್ಯಾರ್ಥಿಗಳಿಗೆ ನಿರಂತರವಾಗಿ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ನಾಲ್ಕು ಸಾರಿಗೆ ಸಂಸ್ಥೆಗಳಿಂದ ಮಹಿಳೆಯರಿಗೆ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಿರುವುದರಿಂದ ಸರ್ಕಾರಿ ಬಸ್‌ಗಳಲ್ಲಿ ಸಂಚರಿಸುವವರ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದ್ದು, ಇದರಿಂದಾಗಿ ಶಾಲಾ ಮಕ್ಕಳಿಗೆ ಅನಾನುಕೂಲವಾಗುತ್ತಿರುವ ಬಗ್ಗೆ ಕೆಲವು ಸ್ಥಳಗಳಲ್ಲಿ ವರದಿಯಾಗಿದ್ದು, ಅಂತಹ ಸ್ಥಳಗಳನ್ನು ಗುರುತಿಸಿ ಆ ಸ್ಥಳಗಳಿಗೆ ನಿಗಮದ ಸಿಬ್ಬಂದಿಗಳನ್ನು ಮೇಲ್ವಿಚಾರಣೆಗಾಗಿ ನಿಯೋಜಿಸಲಾಗುತ್ತಿದೆ ಹಾಗೂ ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಸರತಿಗಳನ್ನು ಅಳವಡಿಸಲು ಕ್ರಮವಹಿಸಲಾಗುತ್ತಿದೆ.<br><br>ಶಾಲಾ/ಕಾಲೇಜು ವಿದ್ಯಾರ್ಥಿಗಳಿಗೆ ಅವರ ಶಾಲಾ ಕಾಲೇಜು ಸಮಯಕ್ಕೆ ಅವಶ್ಯಕತೆಗೆ ಅನುಗುಣವಾಗಿ ಸುತ್ತುವಳಿಗಳು/ಬಸ್ಸುಗಳನ್ನು ಕಲ್ಪಿಸಲು ಈ ಕೆಳಕಂಡ ಅಂಶಗಳನ್ನು ಅನುಸರಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಗಿದೆ.<br><br>• ಗ್ರಾಮೀಣ ಪ್ರದೇಶಗಳ ವಿಭಾಗದ ವ್ಯಾಪ್ತಿಯಲ್ಲಿ ಬರುವ ಶಾಲಾ/ಕಾಲೇಜುಗಳ ಪ್ರಾಂಶುಪಾಲರು/ ಮುಖ್ಯಸ್ಥರುಗಳನ್ನು ಸಂಪರ್ಕಿಸಿ, ಶಾಲಾ/ಕಾಲೇಜುಗಳ ಸಮಯಗಳನ್ನು ತಿಳಿದುಕೊಂಡು ಸದರಿ ಸಮಯಕ್ಕೆ ಸಾರಿಗೆಗಳನ್ನು ಕಾರ್ಯಾಚರಿಸಲು ಸೂಕ್ತ ಕ್ರಮ ಕೈಗೊಳ್ಳುವುದು.<br><br>• ಶಾಲಾ/ಕಾಲೇಜು ವಿದ್ಯಾರ್ಥಿಗಳು ಹೆಚ್ಚಿಗೆ ಸೇರುವ ಬಸ್ ನಿಲ್ದಾಣ/ಜಂಕ್ಷನ್‌ಗಳಲ್ಲಿ ಸಾರಿಗೆ ಸೇವೆಗಳ ಮೇಲ್ವಿಚಾರಣೆಗೆ ಸಂಚಾರ ನಿಯಂತ್ರಕರು/ಇತರೆ ಮೇಲ್ವಿಚಾರಕರನ್ನು ತಪ್ಪದೇ ನಿಯೋಜಿಸಿ ಸುಗಮ ಕಾರ್ಯಾಚರಣೆ ಬಗ್ಗೆ ನಿಗಾ ವಹಿಸುವುದು.<br><br>• ವಿಭಾಗದ ಎಲ್ಲಾ ಚಾಲನಾ ಸಿಬ್ಬಂದಿಗಳಿಗೆ ಶಾಲಾ ಕಾಲೇಜು ವಿದ್ಯಾರ್ಥಿಗಳು ಬಸ್ಸುಗಳಲ್ಲಿ ಪ್ರಯಾಣಿಸಲು ಅನುವಾಗಲು ನಿಗದಿತ ಬಸ್ ನಿಲ್ದಾಣಗಳಲ್ಲಿ ನಿಲುಗಡೆ ನೀಡಿ ಅವರನ್ನು ಹತ್ತಿಸಿ/ಇಳಿಸಿಕೊಂಡು ಮುಂದೆ ಹೋಗುವುದರ ಜೊತೆಗೆ ವಿದ್ಯಾರ್ಥಿಗಳೊಂದಿಗೆ ಸೌಜನ್ಯದಿಂದ ವರ್ತಿಸಲು ತಿಳುವಳಿಕೆ ನೀಡುವುದು. |

<table>
<tr><th>ಕ್ರ.<br>ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಆ)</td><td>ಬಂದಿದ್ದಲ್ಲಿ, ಈವರೆಗೆ ಎಷ್ಟು ಹೊಸ ಮಾರ್ಗಗಳು ಮತ್ತು ಎಷ್ಟು ಹೆಚ್ಚುವರಿ ಬಸ್‌ಗಳ ಅವಶ್ಯಕತೆ ಇರುವ ಮಾರ್ಗಗಳನ್ನು ಗುರುತಿಸಲಾಗಿದೆ;</td><td rowspan="3">ನಿಗಮಗಳಲ್ಲಿ 2023-24ರ ಪೂರ್ವದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರಲಿಲ್ಲ. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ 2023-24ರ ಪೂರ್ವದ 07 ವರ್ಷಗಳಿಂದ ಮತ್ತು ಉಳಿದ ಸಾರಿಗೆ ಸಂಸ್ಥೆಗಳಲ್ಲಿ 2023-24ರ ಪೂರ್ವದ 04 ವರ್ಷಗಳಿಂದ ಸಿಬ್ಬಂದಿ ನೇಮಕಾತಿ ಆಗಿರಲಿಲ್ಲ. ಇದರಿಂದ ಪ್ರಯಾಣಿಕರಿಗೆ ಬಸ್ಸುಗಳನ್ನು ಒದಗಿಸಲು ತೊಂದರೆಯಾಗಿತ್ತು.<br><br>ಆದರೆ ಪ್ರಸ್ತುತ 2023-24 ಹಾಗೂ 2024-25ನೇ ಸಾಲಿನಲ್ಲಿ ಸಾರಿಗೆ ಸಂಸ್ಥೆಗಳಲ್ಲಿ ಖರೀದಿಸಲಾದ/ಖರೀದಿಸಲಾಗುವ ಬಸ್‌ಗಳ ವಿವರ ಕೆಳಗಿನಂತಿರುತ್ತದೆ:<br><br>
<table>
<tr><th>ಸಂಸ್ಥೆ</th><th>ಸೇರ್ಪಡೆಯಾದ ಬಸ್‌ಗಳ ಸಂಖ್ಯೆ</th><th>ಸೇರ್ಪಡೆಗೊಳಿಸ-ಲಾಗುತ್ತಿರುವ ಬಸ್‌ಗಳ ಸಂಖ್ಯೆ</th></tr>
<tr><td>ಕ.ರಾ.ರ.ಸಾ.ನಿಗಮ</td><td>1118</td><td>20</td></tr>
<tr><td>ಬೆಂ.ಮ.ಸಾ.ಸಂಸ್ಥೆ</td><td>1510</td><td>699</td></tr>
<tr><td>ವಾ.ಕ.ರ.ಸಾ.ಸಂಸ್ಥೆ</td><td>662</td><td>554</td></tr>
<tr><td>ಕ.ಕ.ರ.ಸಾ.ನಿಗಮ</td><td>1014</td><td>73</td></tr>
<tr><td>ಒಟ್ಟು</td><td>4304</td><td>1346</td></tr>
</table>
<br>ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ:<br><br>ಪ್ರಸ್ತುತ 2000 ಚಾಲಕ-ಕಂ-ನಿರ್ವಾಹಕ ಹುದ್ದೆಯ ಮೂಲ ದಾಖಲಾತಿಯ ಪರಿಶೀಲನಾ ಕಾರ್ಯ ಪೂರ್ಣಗೊಳಿಸಲಾಗಿದೆ. ಅಲ್ಲದೇ, ಚಾಲಕ-ಕಂ-ನಿರ್ವಾಹಕ ಹುದ್ದೆಯು ಒಳಗೊಂಡಂತೆ ಇತರೆ 194 ವಿವಿಧ ವೃಂದದ ಹುದ್ದೆಗಳನ್ನು ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ.<br><br>ಶಕ್ತಿ ಯೋಜನೆ ಅನುಷ್ಠಾನಗೊಂಡ ದಿನಾಂಕದಿಂದ ಕ.ರಾ.ರ.ಸಾ.ನಿಗಮದ 867 ಪುನಶ್ಚೇತನಗೊಳಿಸಿದ ಬಸ್ಸುಗಳನ್ನು ಕ.ರಾ.ರ.ಸಾ.ನಿಗಮದ ವ್ಯಾಪ್ತಿಯ ವಿಭಾಗಗಳಿಗೆ ನಿಯೋಜಿಸಲಾಗಿರುತ್ತದೆ.<br><br>ಶಕ್ತಿ ಯೋಜನೆ ಜಾರಿಗೂ ಮೊದಲು ಕ.ರಾ.ರ.ಸಾ. ನಿಗಮದ ವತಿಯಿಂದ 45255 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ 50083 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿದಿನ 4828 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ:<br><br>ಸಂಸ್ಥೆಯಲ್ಲಿ ಕೋವಿಡ್ ನಂತರದಲ್ಲಿ 2500 ನಿರ್ವಾಹಕ, ದರ್ಜೆ-3 ಹುದ್ದೆಯ ಮೂಲ ದಾಖಲಾತಿ ಪರಿಶೀಲನಾ ಕಾರ್ಯವನ್ನು ಪೂರ್ಣಗೊಳಿಸಲಾಗಿದೆ. ಅಲ್ಲದೇ, ಅನುಕಂಪದ ಆಧಾರದ ಮೇಲೆ ಚಾಲಕ / ನಿರ್ವಾಹಕರು</td></tr>
<tr><td>ಇ)</td><td>ಈಗಾಗಲೇ ಗುರುತಿಸಿರುವ ಹೊಸ ಮಾರ್ಗಗಳು ಮತ್ತು ಹೆಚ್ಚುವರಿ ಬಸ್‌ಗಳ ಅವಶ್ಯಕತೆ ಇರುವ ಮಾರ್ಗಗಳಲ್ಲಿ<br>ಬೇಡಿಕೆಗನುಗುಣವಾಗಿ ಈಗಾಗಲೇ ಬಸ್ ಸೇವೆ ಒದಗಿಸಲಾಗಿದೆಯೇ; (ವಿವರ ನೀಡುವುದು)</td></tr>
<tr><td>ಈ)</td><td>ಇದುವರೆಗೆ ಬೇಡಿಕೆಗನುಗುಣವಾಗಿ ಹೆಚ್ಚುವರಿ ಬಸ್ ಸೇವೆಗಳನ್ನು ಒದಗಿಸದಿದ್ದಲ್ಲಿ ಯಾವ ಕಾಲಮಿತಿಯೊಳಗೆ ಒದಗಿಸಲಾಗುವುದು ಹಾಗೂ ಈ ನಿಟ್ಟಿನಲ್ಲಿ ಇದುವರೆಗೆ ಕೈಗೊಂಡಿರುವ ಕ್ರಮಗಳೇನು?</td></tr>
</table>

| ಕ್ರ. ಸಂ | ಪ್ರಶ್ನೆ | ಉತ್ತರ |
| --- | --- | --- |
| | | ಒಳಗೊಂಡಂತೆ ಒಟ್ಟಾರೆಯಾಗಿ 306 ವಿವಿದ ವೃಂದದ ಹುದ್ದೆಗಳಿಗೆ ನೇಮಕ ಮಾಡಲಾಗಿದೆ.<br><br>• ಸಂಸ್ಥೆಯು ಪ್ರತಿದಿನ ಹವಾನಿಯಂತ್ರಿತ ಸಾರಿಗೆಗಳನ್ನು ಒಳಗೊಂಡಂತೆ 5,808 ಅನುಸೂಚಿಗಳನ್ನು 60,754 ಸುತ್ತುವಳಿಗಳೊಂದಿಗೆ 11.93 ಲಕ್ಷ ಕಿ.ಮೀ.ಗಳಲ್ಲಿ ಬೆಂಗಳೂರು ನಗರ ಹಾಗೂ ಹೊರವಲಯದ ಪ್ರಯಾಣಿಕರ ದಟ್ಟಣೆ/ ಅವಶ್ಯಕತೆಗನುಗುಣವಾಗಿ ಕಾರ್ಯಾಚರಣೆ ಮಾಡುತ್ತಿದ್ದು, ಸರಾಸರಿ 40 ಲಕ್ಷ ಪ್ರಯಾಣಿಕರು ಪ್ರಯಾಣಿಸುತ್ತಿದ್ದಾರೆ.<br>• ಸಂಸ್ಥೆಯಲ್ಲಿ ಶಕ್ತಿ ಯೋಜನೆ ಜಾರಿಗೆ ಮೊದಲು ಸಂಸ್ಥೆಯಲ್ಲಿ 5,555 ಅನುಸೂಚಿಗಳಿಂದ 56,646 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ ಪ್ರಸ್ತುತ 5,808 ಅನುಸೂಚಿಗಳಿಂದ 60,754 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, ಒಟ್ಟು 253 ಅನುಸೂಚಿಗಳನ್ನು ಹಾಗೂ 4,108 ಸುತ್ತುವಳಿಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>**ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ:**<br>ಈಗಾಗಲೇ 2000 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಅನುಮೋದನೆ ನೀಡಲಾಗಿದ್ದು, ಅದರಂತೆ, 1000 ಚಾಲನಾ ಹುದ್ದೆಯ ಮೂಲ ದಾಖಲಾತಿಯ ಪರಿಶೀಲನಾ ಕಾರ್ಯ ಪೂರ್ಣಗೊಳಿಸಲಾಗಿದೆ. ಸದರಿ ನೇಮಕಾತಿ ಪ್ರಕ್ರಿಯೆ ಮುಕ್ತಾಯಗೊಂಡ ನಂತರ ಉಳಿದ 1000 ಚಾಲನಾ ಸಿಬ್ಬಂದಿಗಳ ನೇಮಕಾತಿಗಾಗಿ ಜಾಹಿರಾತು ಹೊರಡಿಸಲಾಗುವುದು. ಅಲ್ಲದೇ ಚಾಲಕ-ಕಂ-ನಿರ್ವಾಹಕ ಹುದ್ದೆಯು ಒಳಗೊಂಡಂತೆ ಇತರೆ ಒಟ್ಟು 391 ವಿವಿಧ ವೃಂದಗಳಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ.<br>• ಶಕ್ತಿ ಯೋಜನೆ ಜಾರಿಗೂ ಮೊದಲು 4567 ಅನುಸೂಚಿಗಳಿಂದ 34676 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಶಕ್ತಿ ಯೋಜನೆ ಜಾರಿ ನಂತರ ಅಂದರೆ ಅಕ್ಟೋಬರ್-2024ರ ಮಾಹೆಯ ಅಂತ್ಯಕ್ಕೆ 4668 ಅನುಸೂಚಿಗಳಿಂದ 36654 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿ ದಿನ 104 ಅನುಸೂಚಿಗಳಿಂದ 410 ಮಾರ್ಗಗಳಲ್ಲಿ ಒಟ್ಟು 1978 ಸರತಿಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.<br>• ಮುಂದುವರೆದು, ಪ್ರಯಾಣಿಕರ ಸಂಖ್ಯೆಗೆ ಅನುಗುಣವಾಗಿ ಸಂಸ್ಥೆಯಲ್ಲಿನ ಲಭ್ಯವಿರುವ ಸಂಪನ್ಮೂಲಗಳಿಂದ 104 ಅನುಸೂಚಿಗಳನ್ನು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ಹೆಚ್ಚಿಸುವುದಲ್ಲದೇ ಜೂನ್-2023ರ ನಂತರದ ಅವಧಿಯಲ್ಲಿ 140 ಅಂತರ ರಾಜ್ಯ ಸಾರಿಗೆಗಳನ್ನು ಸ್ಥಗಿತಗೊಳಿಸಿ ಸದರಿ ವಾಹನಗಳನ್ನೂ ಸಹ ರಾಜ್ಯದೊಳಗೆ ಕಾರ್ಯಾಚರಣೆಗ ಬಳಸಿಕೊಂಡು ಸಾರ್ವಜನಿಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಕಾರ್ಯಾಚರಣೆ ಮಾಡಲಾಗುತ್ತಿದೆ.<br>• ಚಾಲನಾ ಸಿಬ್ಬಂದಿಗಳ ಕೊರತೆಯನ್ನು ನೀಗಿಸಲು ಹೊರಗುತ್ತಿಗೆ ಆಧಾರದ ಮೇಲೆ 400 ಚಾಲಕರನ್ನು ಪಡೆಯಲಾಗಿದೆ. ಇನ್ನೂ 500 ಚಾಲಕರನ್ನು ಗುತ್ತಿಗೆ ಆಧಾರದ ಮೇಲೆ ಪಡೆಯುವ ಪ್ರಕ್ರಿಯೆ ಜಾರಿಯಲ್ಲಿದೆ.<br>• 2024-25ನೇ ಸಾಲಿನ ಅಂತ್ಯಕ್ಕೆ 4745 ಅನುಸೂಚಿಗಳನ್ನು ಕಾರ್ಯಾಚರಿಸಲು ಯೋಜನೆ ರೂಪಿಸಲಾಗಿರುತ್ತದೆ.<br>**ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ**<br>ಪ್ರಸ್ತುತ 1583 ಚಾಲಕ ಹಾಗೂ ಚಾಲಕ-ಕಂ-ನಿರ್ವಾಹಕ ಹುದ್ದೆಗಳನ್ನು ನೇರ ನೇಮಕಾತಿ ಹಾಗೂ ಇತರೆ 121 ವಿವಿಧ ವೃಂದದ ಹುದ್ದೆಗಳನ್ನು ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ.<br>• ನಿಗಮದಲ್ಲಿ ಶಕ್ತಿ ಯೋಜನೆ ಜಾರಿ ಪೂರ್ವ 4028 ಅನುಸೂಚಿಗಳೊಂದಿಗೆ 22214 ಸರತಿಗಳನ್ನು ಕಾರ್ಯಾಚರಿಸಲಾಗುತ್ತಿದ್ದು ಶಕ್ತಿ ಯೋಜನೆ ನಂತರ 4631 ಅನುಸೂಚಿಗಳೊಂದಿಗೆ 27030 ಸರತಿಗಳನ್ನು ಕಾರ್ಯಾಚರಿಸಲಾಗುತ್ತಿದೆ.<br>• ಶಕ್ತಿ ಯೋಜನೆ ಪೂರ್ವಕ್ಕೆ ಹೋಲಿಸಿದಲ್ಲಿ ಪ್ರತಿ ದಿನ 603 ಹೆಚ್ಚಿನ ಅನುಸೂಚಿಗಳಿಂದ 4816 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ<br>ಪ್ರಸ್ತುತ, ಕಲ್ಪಿಸುತ್ತಿರುವ ಸಾರಿಗೆಗಳು ಶಾಲಾ/ಕಾಲೇಜು ವಿದ್ಯಾರ್ಥಿಗಳ ಹಾಗೂ ಸಾರ್ವಜನಿಕ ಪ್ರಯಾಣಿಕರ ಬೇಡಿಕೆಗೆ ಅನುಗುಣವಾಗಿ ಇರುತ್ತದೆ. ಆದಾಗ್ಯೂ, ಹೆಚ್ಚುವರಿ ಬೇಡಿಕೆ ಬಂದಲ್ಲಿ, ಬೇಡಿಕೆಗೆ ಅನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಕ್ರೂಢೀಕರಿಸಿಕೊಂಡು ಹಂತ ಹಂತವಾಗಿ ಹೆಚ್ಚಿನ ಸಾರಿಗೆ ಸೌಲಭ್ಯವನ್ನು ಒದಗಿಸಲು ಆದ್ಯತೆಯ ಮೇಲೆ ಕ್ರಮ ಕೈಗೊಳ್ಳಲಾಗುತ್ತದೆ. |

ಸಂಖ್ಯೆ: ಟಿಡಿ 212 ಟಿಸಿಕ್ಯೂ 2024

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು